All India Radio: Bangalore
National Bulletin In Kannada
19.07.2025 1.10 p.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ವಿಕಸಿತ ಭಾರತದ ಸಾಕಾರಕ್ಕೆ ತಂತ್ರಜ್ಞಾನದ ಅಡಿಪಾಯ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
- ದಕ್ಷಿಣ ಆಫ್ರಿಕಾದಲ್ಲಿ ಎರಡು ದಿನಗಳ ಜಿ-೨೦ ಹಣಕಾಸು ಸಚಿವರ ಹಾಗೂ ಕೇಂದ್ರೀಯ ಬ್ಯಾಂಕ್ ಗವರ್ನರ್‌ಗಳ ಸಭೆ ಸಂಪನ್ನ
- ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಚೀನಾ ಖಂಡನೆ; ಪ್ರಾದೇಶಿಕ ಭದ್ರತೆ ಖಚಿತಪಡಿಸಲು ಪರಸ್ಪರ ಸಹಕಾರಕ್ಕೆ ಕರೆ
- ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿ; ಎರಡನೇ ಪಂದ್ಯದಲ್ಲಿಂದು ಭಾರತ - ಇಂಗ್ಲೆಂಡ್ ಮುಖಾಮುಖಿ

<><><><>

ವಿಕಸಿತ ಭಾರತ ಗುರಿ ಸಾಕಾರಕ್ಕೆ ದೇಶದಲ್ಲಿ ತಂತ್ರಜ್ಞಾನ ಬುನಾದಿಯಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಎರಡು ದಿನಗಳ ತೆಲಂಗಾಣ ಪ್ರವಾಸದಲ್ಲಿರುವ ಅವರು, ಐಐಟಿ ಹೈದರಾಬಾದ್‌ನ ಘಟಿಕೋತ್ಸವದಲ್ಲಿಂದು ಸಭೆಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ, ಭಾರತದ ತಂತ್ರಜ್ಞಾನ ಚಾಲಿತ ಭವಿಷ್ಯದ ಕುರಿತು ಪ್ರಸ್ತಾಪಿಸಿದ ಅವರು, ಜಾಗತಿಕ ಮಟ್ಟದ ತಂತ್ರಜ್ಞಾನ ಹಾಗೂ ಉತ್ಪನ್ನಗಳನ್ನು ವಿನ್ಯಾಸಗೊಳಿಸುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಆರು ಸೆಮಿಕಂಡಕ್ಟರ್ ಘಟಕಗಳು ಈಗಾಗಲೇ ನಿರ್ಮಾಣ ಹಂತದಲ್ಲಿದ್ದು, ದೇಶದ ಮೊದಲ ಸ್ಥಳೀಯ ಸೆಮಿಕಂಡಕ್ಟರ್ ಚಿಪ್ ಅನ್ನು ಇದೇ ವರ್ಷ ಬಿಡುಗಡೆ ಮಾಡಲಾಗುವುದು. ಆ ಮೂಲಕ ಭಾರತ ಈ ಕ್ಷೇತ್ರದಲ್ಲಿ ಮುಂಚೂಣಿ ಜಾಗತಿಕ ರಾಷ್ಟ್ರವಾಗಲಿದೆ. ಇದೇ ವೇಳೆ ಅವರು, ೨೦೨೮ರ ವೇಳೆಗೆ ವಂದೇ ಭಾರತ್ ಮೂರನೇ ಆವೃತ್ತಿಯ ಜತೆಗೆ ದೇಶದ ಮೊದಲ ಬುಲೆಟ್ ಟ್ರೈನ್‌ಗೆ ಹಸಿರು ನಿಶಾನೆ ತೋರಲಾಗುವುದು. ಕಾರ್ಯಕ್ರಮದಲ್ಲಿ ಸಚಿವರು ಇಂಡಿಯಾ ಎಐ ಯೋಜನೆ ಸೇರಿದಂತೆ ಇತರ ಕೃತಕ ಬುದ್ಧಿಮತ್ತೆ ತರಬೇತಿ ಕಾರ್ಯಕ್ರಮಗಳ ಕುರಿತು ಮಾಹಿತಿ

ಹಂಚಿಕೊಂಡರು ಹಾಗೂ ೨೦೪೭ರ ವೇಳೆಗೆ ಜಾಗತಿಕ ಅಗ್ರ ಎರಡು ಆರ್ಥಿಕತೆಗಳಲ್ಲಿ ಭಾರತ ತನ್ನ ಸ್ಥಾನವನ್ನು ಭದ್ರಪಡಿಸಿಕೊಳ್ಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಅಪರಾಹ್ನ ಅವರು, ಕಾಜಿಪೇಟ್‌ನಲ್ಲಿ ಐನೂರು ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುತ್ತಿರುವ ರೈಲ್ವೆ ಉತ್ಪಾದನಾ ಘಟಕದ ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ೨೦೨೩ರ ಜುಲೈನಲ್ಲಿ ಕೇಂದ್ರ ಸಚಿವರು ಈ ಘಟಕದ ಶಂಕುಸ್ಥಾಪನೆ ನೆರವೇರಿಸಿದ್ದರು. ಇಂದು ಸಂಜೆ ಸಚಿವರು ಕಾಚಿಗುಡ ರೈಲ್ವೆ ನಿಲ್ದಾಣದಲ್ಲಿ ಹೈದರಾಬಾದ್‌ನಿಂದ ಜೋಧ್‌ಪುರ್‌ಗೆ ಸಂಚರಿಸುವ ಹೊಸ ರೈಲಿಗೆ ಹಸಿರುನಿಶಾನೆ ತೋರಲಿದ್ದಾರೆ.

<><><><>

ಜಾಗತಿಕ ಸಹಕಾರವನ್ನು ಉತ್ತೇಜಿಸುವ ಉದ್ದೇಶದೊಂದಿಗೆ ದಕ್ಷಿಣ ಆಫ್ರಿಕಾದಲ್ಲಿ ನಡೆದ ಎರಡು ದಿನಗಳ ಜಿ-೨೦ ಹಣಕಾಸು ಸಚಿವರ ಹಾಗೂ ಕೇಂದ್ರೀಯ ಬ್ಯಾಂಕ್ ಗವರ್ನರ್‌ಗಳ ಸಭೆಗೆ ನಿನ್ನೆ ತೆರೆಬಿದ್ದಿದೆ. ಡರ್ಬನ್‌ನಲ್ಲಿ ನಡೆದ ಮಾತುಕತೆಗಳಲ್ಲಿ ವ್ಯಾಪಾರ ಸಮಸ್ಯೆಗಳು, ಪೂರೈಕೆ ಸರಪಳಿ ಅಡತಡೆಗಳು, ಸಾಲದ ಬಿಕ್ಕಟ್ಟು, ಹವಾಮಾನ ಸಂಬಂಧಿತ ವಿಪತ್ತುಗಳು ಸೇರಿದಂತೆ ಪ್ರಮುಖ ಜಾಗತಿಕ ಸವಾಲುಗಳ ಕುರಿತು ಚರ್ಚೆಗಳು ನಡೆದವು. ಈ ವೇಳೆ ಅಧಿಕಾರಿಗಳು ಪ್ರಸ್ತುತವಿರುವ ಹಾಗೂ ಮುಂದೆ ಎದುರಾಗಬಹುದಾದ ಸವಾಲುಗಳನ್ನು ಒಗ್ಗಟ್ಟಿನೊಂದಿಗೆ ಎದುರಿಸಲು ನಿರ್ಧರಿಸಿದರು. ಇದೇ ವೇಳೆ ಸಚಿವರುಗಳು ಅಭಿವೃದ್ಧಿ ಕೇಂದ್ರಿತ ಆರ್ಥಿಕ ನೀತಿಗಳನ್ನು ರೂಪಿಸುವ ಬಗ್ಗೆ ಸಹಮತ ವ್ಯಕ್ತಪಡಿಸಿದರು. ಬಳಿಕ ದಕ್ಷಿಣ ಆಫ್ರಿಕಾದ ಸಂಸತ್ ಮಂಡಳಿ ಬಿಡುಗಡೆಗೊಳಿಸಿದ ಹೇಳಿಕೆಯಲ್ಲಿ, ಪ್ರಸ್ತುತ ಪರಿಸ್ಥಿತಿಗಳಿಗೆ ಹೊಂದಿಕೊಳ್ಳುವಂತೆ ಜಾಗತಿಕ ವ್ಯಾಪಾರ ಸಂಸ್ಥೆ - ಡಬ್ಲ್ಯೂಟಿಒ ತನ್ನ ಕಾರ್ಯ ನಿರ್ವಹಣೆಯಲ್ಲಿ ಸುಧಾರಣೆ ತಂದು ನವೀನ ದೃಷ್ಟಿಕೋನವನ್ನು ಅಳವಡಿಸಿಕೊಳ್ಳುವ ಕುರಿತು ಒತ್ತಿ ಹೇಳಲಾಗಿದೆ.

<><><><>

ಸ್ವಾತಂತ್ರ್ಯ ಹೋರಾಟಗಾರ ಮಂಗಲ್ ಪಾಂಡೆ ಅವರ ಜನ್ಮ ದಿನದ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ, ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ಬ್ರಿಟಿಷ್ ಆಡಳಿತವನ್ನು ಪ್ರಶ್ನಿಸಿದ, ದೇಶದ ಪ್ರಮುಖ ಯೋಧ ಮಂಗಲ್ ಪಾಂಡೆ ಅವರ ಧೈರ್ಯ ಮತ್ತು ಶೌರ್ಯದ ಕಥೆಯು, ದೇಶದ ಜನರಿಗೆ ಸ್ಪೂರ್ತಿಯ ಸೆಲೆಯಾಗಿದೆ ಎಂದು ಸ್ಮರಿಸಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ, ಸಾಮಾಜಿಕ ಮಾಧ್ಯಮದಲ್ಲಿ ಮಂಗಲ್ ಪಾಂಡೆ ಅವರನ್ನು

ದೇಶಭಕ್ತಿಗೆ ಸ್ಫೂರ್ತಿ ಎಂದು ಹೇಳುವ ಮೂಲಕ ಗೌರವ ಸಲ್ಲಿಸಿದ್ದಾರೆ. ಸ್ವಾತಂತ್ರ ಸಂಗ್ರಾಮದ ಜ್ವಾಲೆಗಳನ್ನು ಹೊತ್ತಿಸುವಲ್ಲಿ ಮಂಗಲ್ ಪಾಂಡೆ ಅವರ ಪ್ರಮುಖ ಪಾತ್ರವನ್ನು ಸ್ಮರಿಸಿದ್ದಾರೆ. ತಮ್ಮ ಶೌರ್ಯದ ಕಿಡಿಯಿಂದ, ಮಂಗಲ್ ಪಾಂಡೆ ೧೮೫೭ ರ ದಂಗೆಯನ್ನು ಬೃಹತ್ ಜ್ವಾಲೆಯನ್ನಾಗಿ ಪರಿವರ್ತಿಸಿದರು, ಬ್ರಿಟಿಷ್ ಆಳ್ವಿಕೆಯ ಅಡಿಪಾಯವನ್ನು ಅಲುಗಾಡಿಸಿದರು ಎಂದು ಅಮಿತ್ ಶಾ ಹೇಳಿದ್ದಾರೆ.

<><><><>

ಏಪ್ರಿಲ್ ೨೨ರಂದು ೨೬ ನಾಗರಿಕರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಚೀನಾ ಖಂಡಿಸಿದೆ. ಪ್ರಾದೇಶಿಕ ಭದ್ರತೆಯನ್ನು ಕಾಪಾಡಲು ಭಯೋತ್ಪಾದನಾ ನಿಗ್ರಹ ಸಹಕಾರವನ್ನು ಹೆಚ್ಚಿಸುವಂತೆ ಪ್ರಾದೇಶಿಕ ದೇಶಗಳಿಗೆ ಕರೆ ನೀಡಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿರುವುದಕ್ಕಾಗಿ ಪಾಕಿಸ್ತಾನ ಮೂಲದ ಲಷ್ಕರ್-ಎ-ತಯ್ಯಿಬಾ ಸಂಘಟನೆಯ ಅಂಗ ಸಂಸ್ಥೆಯಾದ ರೆಸಿಸ್ಟೆನ್ಸ್ ಫ್ರಂಟ್‌ಅನ್ನು ವಿದೇಶಿ ಭಯೋತ್ಪಾದಕ ಸಂಘಟನೆ ಎಂದು ಅಮೆರಿಕ ಹೆಸರಿಸಿದ್ದಕ್ಕೆ ಪ್ರತಿಕ್ರಿಯೆಯಾಗಿ, ದೇಶವು ಎಲ್ಲಾ ರೀತಿಯ ಭಯೋತ್ಪಾದನೆಯನ್ನು ವಿರೋಧಿಸುತ್ತದೆ ಎಂದು ಚೀನಾ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಹೇಳಿದ್ದಾರೆ.

<><><><>

ದೆಹಲಿ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿದ್ದ ವಿಭು ಬಖ್ರು ಬೆಂಗಳೂರಿನ ರಾಜಭವನದಲ್ಲಿ ಇಂದು ನಡೆದ ಸಮಾರಂಭದಲ್ಲಿ ಕರ್ನಾಟಕದ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ಸ್ವೀಕರಿಸಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಪ್ರತಿಜ್ಞಾವಿಧಿ ಬೋಧಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಉತ್ತರಾಖಂಡದ ರುದ್ರಪುರದಲ್ಲಿ ನಡೆಯಲಿರುವ ಉತ್ತರಾಖಂಡ್ ನಿವೇಶ್ ಉತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ. ಉಧಂಸಿಂಗ್‌ನಗರ್ ಜಿಲ್ಲೆಯಲ್ಲಿ ನಡೆಯಲಿರುವ ಈ ಕಾರ್ಯಕ್ರಮ ಕೈಗಾರಿಕಾ ಹೂಡಿಕೆಯಲ್ಲಿ ರಾಜ್ಯ ಸಾಧಿಸಿರುವ ಪ್ರಗತಿಯನ್ನು

ಪ್ರದರ್ಶಿಸಲಿದೆ. ೨೦೨೩ರ ಡಿಸೆಂಬರ್‌ನಲ್ಲಿ ಡೆಹ್ರಾಡೂನ್‌ನಲ್ಲಿ ನಡೆದ ಜಾಗತಿಕ ಹೂಡಿಕೆದಾರರ ಸಮ್ಮೇಳನದ ಬಳಿಕ ಸುಮಾರು ಒಂದು ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಹೂಡಿಕೆ ಒಪ್ಪಂದಗಳನ್ನು ಈಗಾಗಲೇ ಅನುಷ್ಠಾನಗೊಳಿಸಲಾಗಿದೆ. ೨೦೨೩ರ ಶೃಂಗಸಭೆಯಲ್ಲಿ ಸುಮಾರು ೩.೫ ಲಕ್ಷ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಒಟ್ಟು ಒಂದು ಸಾವಿರದ ೭೭೯ ತಿಳಿವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಗಿತ್ತು.

<><><><>

ಇಂದು ಬೆಳಗಿನ ಜಾವ ಉತ್ತರಪ್ರದೇಶದ ಯಮುನಾ ಎಕ್ಸ್‌ಪ್ರೆಸ್‌ವೇಯಲ್ಲಿ ನಡೆದ ಎರಡು ಪ್ರತ್ಯೇಕ ಅಪಘಾತಗಳಲ್ಲಿ ಕನಿಷ್ಠ ಆರು ಜನರು ಸಾವನ್ನಪ್ಪಿದ್ದು, ೧೯ ಜನರು ಗಾಯಗೊಂಡಿದ್ದಾರೆ. ಬೆಳಗಿನ ಜಾವ ೩ ಗಂಟೆಗೆ ಮಿನಿ ವ್ಯಾನ್, ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಆರು ಜನರು ಸಾವನ್ನಪ್ಪಿದ್ದು, ಇಬ್ಬರು ಗಂಭೀರ ಗಾಯಗೊಂಡಿದ್ದಾರೆ ಎಂದು ಮಥುರಾದ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಶ್ಲೋಕ್ ಕುಮಾರ್ ತಿಳಿಸಿದ್ದಾರೆ. ಕೇವಲ ಒಂದು ಗಂಟೆಯ ನಂತರ, ದೆಹಲಿಯಿಂದ ಮಧ್ಯಪ್ರದೇಶಕ್ಕೆ ಪ್ರಯಾಣಿಸುತ್ತಿದ್ದ ಖಾಸಗಿ ಬಸ್ ಪಲ್ಟಿಯಾಗಿ ೧೭ ಪ್ರಯಾಣಿಕರು ಗಾಯಗೊಂಡರು. ಗಾಯಾಳುಗಳಲ್ಲಿ ಎಂಟು ಜನರನ್ನು ಮಥುರಾದ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇತರ ಒಂಭತ್ತು ಜನರನ್ನು ಆಗ್ರಾದ ಎಸ್‌ಎನ್ ವೈದ್ಯಕೀಯ ಕಾಲೇಜಿಗೆ ಚಿಕಿತ್ಸೆಗಾಗಿ ಕರೆದೊಯ್ಯಲಾಗಿದೆ. ಎಲ್ಲಾ ಗಾಯಾಳುಗಳ ಸ್ಥಿತಿ ಸ್ಥಿರವಾಗಿದೆ ಎಂದು ವರದಿಯಾಗಿದೆ.

<><><><>

ಲಂಡನ್‌ನ ಲಾರ್ಡ್ಸ್ ಕ್ರೀಡಾಂಗಣದಲ್ಲಿಂದು ಮೂರು ಪಂದ್ಯಗಳ ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಭಾರತ - ಇಂಗ್ಲೆಂಡ್ ವನಿತೆಯರ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದೆ. ಇದೇ ೧೬ರಂದು ನಡೆದ ಮೊದಲನೇ ಪಂದ್ಯದಲ್ಲಿ ೪ ವಿಕೆಟ್‌ಗಳ ಅಂತರದಲ್ಲಿ ಗೆಲುವು ಸಾಧಿಸಿರುವ ಭಾರತ, ಮೂರು ಪಂದ್ಯಗಳ ಸರಣಿಯಲ್ಲಿ ೧-೦ ಅಂತರದ ಮುನ್ನಡೆ ಸಾಧಿಸಿದ್ದು, ಇಂದಿನ ಪಂದ್ಯ ಗೆಲ್ಲುವ ಮೂಲಕ ಸರಣಿಯನ್ನು ತನ್ನದಾಗಿಸಿಕೊಳ್ಳುವ ತವಕದಲ್ಲಿದೆ.

<><><><>

ಸಂಸತ್ತಿನ ಮಳೆಗಾಲದ ಅಧಿವೇಶನ ಬರುವ ಸೋಮವಾರದಿಂದ ಆರಂಭವಾಗಲಿದೆ. ಇದಕ್ಕೂ ಮುನ್ನ ಕೇಂದ್ರ ಸರ್ಕಾರ ನಾಳೆ ಸರ್ವಪಕ್ಷ ಸಭೆ ಕರೆದಿದೆ. ಈ ಸಭೆಯಲ್ಲಿ, ಸಂಸತ್ತಿನ ಎರಡೂ ಸದನಗಳ ಸುಗಮ ಕಾರ್ಯನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು, ಸರ್ಕಾರ ಎಲ್ಲಾ ರಾಜಕೀಯ ಪಕ್ಷಗಳಿಂದ ಸಹಕಾರ ಕೋರಲಿದೆ. ಇದೇ ೨೧ ರಿಂದ, ಮುಂದಿನ ತಿಂಗಳ ೨೧ ರವರೆಗೆ ಮಳೆಗಾಲದ ಅಧಿವೇಶನ ನಡೆಯಲಿದೆ. ಅಧಿವೇಶನದಲ್ಲಿ, ಹಲವಾರು ಪ್ರಮುಖ ಶಾಸನಗಳನ್ನು ಚರ್ಚೆ ಮತ್ತು ಅಂಗೀಕಾರಕ್ಕಾಗಿ ಕೈಗೆತ್ತಿಕೊಳ್ಳಲು ನಿರ್ಧರಿಸಲಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>